**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 26 (32) |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ |
| ಉತ್ತರಿಸಬೇಕಾದ ದಿನಾಂಕ | : | 27.01.2026 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ-ಆಸ್ತಿ ತಂತ್ರಾಂಶದ ಅನುಷ್ಠಾನದ ನಂತರ ಸಾರ್ವಜನಿಕರಿಗೆ ಆಸ್ತಿ ನೋಂದಣಿ ಮತ್ತು ಖಾತೆ ಬದಲಾವಣೆಯಲ್ಲಿ ಆಗುತ್ತಿರುವ ವಿಳಂಬ ಸರ್ಕಾರದ ಗಮನಕ್ಕೆ ಬಂದಿದೆಯೇ; | ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ-ಆಸ್ತಿ ತಂತ್ರಾಂಶದ ಅನುಷ್ಠಾನದ ನಂತರ ನಮೂನೆ-3 ಮತ್ತು ಆಸ್ತಿ ಹಕ್ಕು ವರ್ಗಾವಣೆ ಕೋರಿ ಸಾರ್ವಜನಿಕರಿಂದ ಸಲ್ಲಿಕೆಯಾಗುವ ಅರ್ಜಿಗಳ ವಿಲೇವಾರಿಗೆ ನಿಗಧಿತ ಕಾಲಮಿತಿಯೊಳಗೆ ವಿಲೇವಾರಿ ಮಾಡಲು ಈಗಾಗಲೇ ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ದಿನಾಂಕ:01.08.2023 ರಲ್ಲಿ ಸೂಚನೆಗಳನ್ನು ನೀಡಲಾಗಿದೆ.<br><br>ಅದರಂತೆ, ನಮೂನೆ-3 ಕೋರಿ ಸ್ವೀಕೃತವಾಗುವ ಅರ್ಜಿಗಳನ್ನು 07 ದಿನಗಳ ಕಾಲಮಿತಿಯೊಳಗೆ ಹಾಗೂ ಆಸ್ತಿ ಹಕ್ಕು ವರ್ಗಾವಣೆ ಕೋರಿ ಸ್ವೀಕೃತವಾಗುವ ಅರ್ಜಿಗಳನ್ನು 30 ದಿನಗಳ ಕಾಲಮಿತಿಯೊಳಗೆ ವಿಲೇಗೊಳಿಸಲಾಗುತ್ತಿದೆ. ಮುಂದುವರೆದು, ಅನಗತ್ಯ ವಿಳಂಬವನ್ನು ತಪ್ಪಿಸಲು ಕಾರ್ಯಹರಿವಿನಲ್ಲಿ ಹಂತಗಳನ್ನು ಕಡಿಮೆ ಮಾಡಲಾಗಿದೆ.<br><br>ಸಾರ್ವಜನಿಕರು ತಮ್ಮ ಅರ್ಜಿಗಳನ್ನು ಇ-ಆಸ್ತಿ ತಂತ್ರಾಂಶದಲ್ಲಿ ಮಾತ್ರವಲ್ಲದೇ ನಗರ ಸ್ಥಳೀಯ ಸಂಸ್ಥೆಗಳ ಸಹಾಯವಾಣಿ / ಕರ್ನಾಟಕ-ಒನ್ ಸೇವಾಕೇಂದ್ರಗಳ ಮೂಲಕ ದಾಖಲಿಸಲು ಅವಕಾಶ ಕಲ್ಪಿಸಲಾಗಿದ್ದು, ವಿಲೇವಾರಿಗಾಗಿ First in First out ಮಾದರಿಯನ್ನು ತಂತ್ರಾಂಶದಲ್ಲಿ ಅಳವಡಿಸಲಾಗಿದೆ. ಕೈ ಬರಹದ ಅರ್ಜಿಗಳನ್ನು ಭೌತಿಕವಾಗಿ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವೀಕರಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. |
| ಆ) | ತೆರಿಗೆ ಸೋರಿಕೆಯನ್ನು ತಡೆಗಟ್ಟಲು ಸರ್ಕಾರ ತರಲು ಉದ್ದೇಶಿಸಿರುವ ಹೊಸ ಡಿಜಿಟಲ್ ಸುಧಾರಣೆಗಳೇನು? | ತೆರಿಗೆ ಸೋರಿಕೆಯನ್ನು ತಡೆಗಟ್ಟಲು Property Tax Calculator ಸಾಫ್ಟ್‌ವೇರ್ ಅಭಿವೃದ್ಧಿಪಡಿಸಲಾಗಿದೆ ಹಾಗೂ ಕರ್ನಾಟಕ-ಒನ್ ಸೇವಾ ಕೇಂದ್ರಗಳಲ್ಲಿಯೂ ಸಹ ಪಾವತಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ.<br><br>ಮುಂದುವರೆದು, ಇ-ಸ್ವೀಕೃತಿ ತಂತ್ರಾಂಶದ ಮೂಲಕ ಆನ್‌ಲೈನ್ ತೆರಿಗೆ ಪಾವತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. |

**ಸಂಖ್ಯೆ: ನಅಇ 19 ಜಿಇಎಲ್ 2026 (ಇ)**

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು